ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಶುದ್ಧ ಕುಡಿಯುವ ನೀರಿನ ಘಟಕಗಳ ಕುರಿತು

ಶ್ರೀ ರಘುನಾಥ್ ರಾವ್ ಮಲ್ಕಾ ಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) -

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಡಾ. ವೈ. ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)

ಶ್ರೀ ಎಸ್. ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ)

70(563+511+557+594) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಇದುವರೆಗೂ ರಾಜ್ಯದಲ್ಲಿ ಮಂಜೂರು ಆಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು; ಈ ಪೈಕಿ ಕಾರ್ಯಾರಂಭ ಮಾಡಿರುವ ಘಟಕಗಳ ಸಂಖ್ಯೆ ಎಷ್ಟು ಹಾಗೂ ನಿರ್ಮಾಣ ಹಂತದಲ್ಲಿರುವ ಘಟಕಗಳ ಸಂಖ್ಯೆ ಎಷ್ಟು; ನಿರ್ಮಾಣ ಹಂತದಲ್ಲಿರುವ ಘಟಕಗಳು ಯಾವ ಕಾಲಮಿತಿಯೊಳಗೆ ಕಾರ್ಯಾರಂಭಗೊಳ್ಳುವುವು;

(ಆ) ಸದರಿ ಘಟಕಗಳಿಗೆ ಬಿಡುಗಡೆಯಾಗಿರುವ ಮತ್ತು ಖರ್ಚಾದ ಹಾಗೂ ಬಾಕಿ ಇರುವ ಅನುದಾನವೆಷ್ಟು (ತಾಲ್ಲೂಕುವಾರು, ಗ್ರಾಮ ಪಂಚಾಯಿತಿವಾರು, ಗ್ರಾಮವಾರು ಪ್ರತಿ ಘಟಕದ ವಿವರ ನೀಡುವುದು)

(ಇ) ಈಗಾಗಲೇ ನಿರ್ಮಿಸಿರುವ ಶುದ್ಧ ಕುಡಿಯುವ ನೀರಿನ ಘಟಕಗಳಲ್ಲಿ ದುರಸ್ಥಿಗೆ ಎಷ್ಟು ಘಟಕಗಳು ಬಂದಿರುತ್ತವೆ; ಸಂಪೂರ್ಣ ಹಾಳಾಗಿರುವ ಘಟಕಗಳ ಸಂಖ್ಯೆ ಎಷ್ಟು; ಈ ಘಟಕಗಳನ್ನು ನಿರ್ಮಾಣ ಮಾಡಿರುವ ಹಾಗೂ ನಿರ್ವಹಣೆ ಜವಬ್ದಾರಿವಹಿಸಿರುವ ಸಂಸ್ಥೆ/ಏಜನ್ಸಿಗಳ ವಿವರ ನೀಡುವುದು(ಜಿಲ್ಲಾವಾ , ಕಂಪನಿ/ಏಜನ್ಸಿಗಳ ಹೆಸರು ಮತ್ತು ವಿಳಾಸದೊಂದಿಗೆ ಮಾಹಿತಿ ಒದಗಿಸುವುದು)

(ಉ) ಸಂಸ್ಥೆ/ಏಜನ್ಸಿ ಹಾಗೂ ಅಧಿಕಾರಿಗಳ ನಿರ್ಲಕ್ಷ್ಯದಿಂದ ಈ ಘಟಕಗಳು ಸರಿಯಾಗಿ ನಿರ್ವಹಣೆಯಾಗುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಅಂತಹವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು;

(ಊ) ಶುದ್ಧ ಕುಡಿಯುವ ನೀರಿನ ಘಟಕಗಳು ಉತ್ತಮವಾಗಿ ಕಾರ್ಯನಿರ್ವಹಿಸುವಂತೆ ದುರಸ್ಥಿಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; ಹಾಗೂ ಯಾವ ಕಾಲಮಿತಿಯೊಳಗೆ ಸದರಿ ದುರಸ್ಥಿ ಕಾರ್ಯಕೈಗೊಳ್ಳಲಾಗುವುದು?